# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ವಿ.ಜೆ.ರಾಯ್ಕರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಥಣಿ ಇವರು ವಿರುದ್ಧ ಲೋಕಾಯುಕ್ತ ಇಲಾಖಾ ವಿಚಾರಣೆ – ಅಂತಿಮ ಆದೇಶ.

**ಓದಲಾಗಿದೆ:-**

1. ಸಕಾರದ ಆದೇಶ ಸಂಖ್ಯೆ ಗ್ರಾಅಪ 88 ಇಎನ್‌ಕ್ಯೂ 2017 ದಿನಾಂಕ:22.08.2017.
2. ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಇಲಾಖಾ ವಿಚಾರಣೆ ವರದಿ ಸಂಖ್ಯೆ: UPLOK-1/DE/977/2017/ARE-10, ದಿನಾಂಕ:30.09.2021.
3. ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸು ವರದಿ ಸಂಖ್ಯೆ:UPLOK/DE/977/2017/ARE-10, ದಿನಾಂಕ:11.10.2021.

*******

**ಪ್ರಸ್ತಾವನೆ:-**

ಶ್ರೀ ಶಿವಾಜಿ ಬಾಳಪ್ಪ ಸನದಿ ಅಥಣಿ, ಬೆಳಗಾವಿ ಜಿಲ್ಲೆ, ಇವರು 2008-09ನೇ ಸಾಲಿನ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಅಥಣಿ ತಾಲ್ಲೂಕಿನ, ನಂದಗಾಂವ್ ಗ್ರಾಮದಲ್ಲಿ ಏತ ನೀರಾವರಿಗೆ ಬಿಡುಗಡೆಯಾದ ರೂ.15.00 ಲಕ್ಷ ಹಣವನ್ನು ಸದರಿ ಕೆಲಸಕ್ಕೆ ಬಳಸದೇ, ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, ಬಿಲ್ಲಿನ ಮೊತ್ತವನ್ನು ಪಡೆದು ಸರ್ಕಾರಕ್ಕೆ ವಂಚನೆ ಮಾಡಿರುತ್ತಾರೆಂದು ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ನೀಡಿದ ದೂರಿನ ಮೇರೆಗೆ ಕರ್ನಾಟಕ ಲೋಕಾಯುಕ್ತ ಕಛೇರಿಯು ತನಿಖೆ ನಡೆಸಿ ಲೋಕಾಯುಕ್ತ ಕಾಯ್ದೆ ಕಲಂ 12(3)ರ ಅನುಸಾರ ಸಲ್ಲಿಸಿದ್ದ ವರದಿಯನ್ನು ಸರ್ಕಾರವು ಪರಿಶೀಲಿಸಿ, ಆಪಾದಿತ ನೌಕರರಾದ ಶ್ರೀ ವಿ.ಜೆ.ರಾಯ್ಕರ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಥಣಿ ಇವರು ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ನಂದಗಾಂವ್ ಗ್ರಾಮದಲ್ಲಿ ಕೈಗೊಳ್ಳಲಾದ ಗಂಗಾ ಕಲ್ಯಾಣ ಏತ ನೀರಾವರಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ವ್ಯವಸ್ಥಾಪಕರು, ದಿ.ದೇವರಾಜ್ ಅರಸು, ಹಿಂದುಳಿದ ವರ್ಗಗಳ ಹಾಗೂ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿಯಮಿತ) ಬೆಳಗಾವಿ ಇವರು ನಿಗದಿಪಡಿಸಿದ್ದ ನಿಬಂಧನೆಗಳಂತೆ ಕಾಮಗಾರಿಯನ್ನು ಅನುಷ್ಠಾನಗೊಳಿಸದೇ ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ನಿಜವೆಂದು ಕಂಡು ಬಂದ ಹಿನ್ನೆಲೆಯಲ್ಲಿ, ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 11ರಂತೆ

...2

ನಡೆಸಲು ಸದರಿ ನಿಯಮಗಳ ನಿಯಮ 14(ಎ) ರನ್ವಯ ಪ್ರಕರಣವನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:22.08.2017ರ ಸರ್ಕಾರದ ಆದೇಶದಲ್ಲಿ ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲಾಗಿತ್ತು.

ಸದರಿ ಆದೇಶದ ಅನುಸಾರ ಮಾನ್ಯ ಉಪಲೋಕಾಯುಕ್ತ ರವರು ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದ್ದು, ವಿಚಾರಣಾಧಿಕಾರಿಯವರು ಆಪಾದಿತ ನೌಕರರಾದ ಶ್ರೀ ವಿ.ಜೆ.ರಾಯ್ಕರ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಥಣಿ ಇವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ಹಲವಾರು ದಾಖಲೆಗಳು, ಸಾಕ್ಷಿದಾರರು, ಆಪಾದಿತ ನೌಕರರ ಹೇಳಿಕೆಗಳನ್ನು ಪರಿಶೀಲಿಸಿ, ವಿವರವಾಗಿ ವಿಚಾರಣೆ ನಡೆಸಿದ್ದು, ಸದರಿ ಆಪಾದಿತ ನೌಕರರ ವಿರುದ್ಧ ಶಿಸ್ತು ಪ್ರಾಧಿಕಾರವು ಪ್ರಕರಣಕ್ಕೆ ಸಂಬಂಧಪಟ್ಟಂತೆ ದಾಖಲೆ/ಮಾಹಿತಿ ಹಾಗೂ ಸಾಕ್ಷಿ ಒದಗಿಸುವಲ್ಲಿ ವಿಫಲವಾಗಿರುವುದರಿಂದ ಸದರಿ ಆಪಾದಿತ ನೌಕರರ ವಿರುದ್ಧ ಮಾಡಿರುವ ಆರೋಪಗಳನ್ನು ಸಾಬೀತುಪಡಿಸಲು ಸಾಧ್ಯವಾಗಿರುವುದಿಲ್ಲವೆಂದು ಅಭಿಪ್ರಾಯಪಟ್ಟು ವಿಚಾರಣಾ ವರದಿಯನ್ನು ಮಾನ್ಯ ಉಪಲೋಕಾಯುಕ್ತ ರವರಿಗೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ದಿನಾಂಕ:30.09.2021 ರನ್ವಯ ಸಲ್ಲಿಸಿರುತ್ತಾರೆ. ಅದರಂತೆ ಮಾನ್ಯ ಉಪ ಲೋಕಾಯುಕ್ತರವರು ವಿಚಾರಣಾ ವರದಿಗೆ ಸಹಮತಿಸಿ, ಸದರಿ ಆಪಾದಿತರ ವಿರುದ್ಧ ಮಾಡಲಾದ ಆರೋಪಗಳಿಂದ ದೋಷಮುಕ್ತಗೊಳಿಸುವಂತೆ ಮೇಲೆ ಕ್ರಮ ಸಂಖ್ಯೆ(3)ರಲ್ಲಿ ಓದಲಾದ ದಿನಾಂಕ:11.10.2021 ರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ವಿಚಾರಣಾ ವರದಿ, ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸು ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ವಿ.ಜೆ.ರಾಯ್ಕರ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಥಣಿ ಇವರು 2009ನೇ ಸಾಲಿನ ಗಂಗಾ ಕಲ್ಯಾಣ ಏತ ನೀರಾವರಿ ಯೋಜನೆಯಡಿಯಲ್ಲಿ ಅಥಣಿ ತಾಲ್ಲೂಕಿನ, ನಂದಗಾಂವ್ ಗ್ರಾಮದಲ್ಲಿ ಕೈಗೊಳ್ಳಲಾದ ಗಂಗಾ ಕಲ್ಯಾಣ ಏತ ನೀರಾವರಿ ಕಾಮಗಾರಿಯನ್ನು ಆಡಳಿತಾತ್ಮಕ ಅನುಮೋದನೆಯಂತೆ ಭೂಮಿಯ ಆಳದಲ್ಲಿ 03 ಅಡಿ ಪೈಪ್ ಅಳವಡಿಸಿ, ಫಲಾನುಭವಿಗಳ ಜಮೀನಿಗೆ ಕೃಷ್ಣಾ ನದಿಯಿಂದ ಮೋಟಾರ್ ಮುಖಾಂತರ ನೀರಾವರಿ ಸೌಲಭ್ಯ ನೀಡಿದ್ದು, ಸದರಿ ಕಾಮಗಾರಿಯಲ್ಲಿ ಲೋಪದೋಷ ಕಂಡು ಬಂದಿಲ್ಲವೆಂದು ಫಲಾನುಭವಿಗಳು ಸಹ ತಮ್ಮ ಜಮೀನಿಗೆ ಕಾಮಗಾರಿಯ ಅನುಮೋದನೆ ಪ್ರಕಾರ ನೀರಾವರಿ ದೊರೆತಿರುವುದಾಗಿ ಹೇಳಿಕೆ ನೀಡಿರುತ್ತಾರೆ. ಹಾಗಾಗಿ ಸದರಿ ಆಪಾದಿತರು ಯಾವುದೇ ರೀತಿಯ ಕರ್ತವ್ಯ ಲೋಪ ಎಸಗಿರುವುದು ಕಂಡುಬಂದಿರುವುದಿಲ್ಲ. ಆದ್ದರಿಂದ ವಿಚಾರಣಾ ವರದಿಯಲ್ಲಿ ಆಕ್ಷೇಪಿಸಬಹುದಾದ ಯಾವುದೇ ಅಂಶಗಳು ಕಂಡುಬರುವುದಿಲ್ಲ. ಹೀಗಾಗಿ ವಿಚಾರಣಾ

ವರದಿಯನ್ನು ಅಂಗೀಕರಿಸಿ ಸದರಿ ಆಪಾದಿತ ಅಧಿಕಾರಿ/ನೌಕರರ ವಿರುದ್ಧ ಮಾಡಲಾದ ಆರೋಪಗಳಿಂದ ದೋಷಮುಕ್ತಗೊಳಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 109 ಇಎನ್‌ಕ್ಯೂ 2021, ಬೆಂಗಳೂರು,</u>**
**<u>ದಿನಾಂಕ: 17.02.2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಆಪಾದಿತ ನೌಕರರಾದ ಶ್ರೀ ವಿ.ಜೆ.ರಾಯ್ಕರ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಥಣಿ ಇವರ ವಿರುದ್ಧ ಮಾಡಲಾದ ಆರೋಪವು ವಿಚಾರಣೆಯಲ್ಲಿ ಸಾಬೀತಾಗಿಲ್ಲವಾದ್ದರಿಂದ ಸದರಿಯವರನ್ನು ದೋಷಮುಕ್ತಗೊಳಿಸಿ ಆದೇಶಿಸಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

17/2

**(ಕೆ.ನದೀಮ್ ಅಹ್ಮದ್),**
**ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),**
**ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.**

17/02/2022

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಳಗಾವಿ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಜಿಲ್ಲೆ.
5. ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸಂಬಂಧಪಟ್ಟ ಅಧಿಕಾರಿ/ನೌಕರರಿಗೆ ಮುಖ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಇವರ ಮುಖಾಂತರ.

**ಪ್ರತಿಯನ್ನು:**

1. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
2. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು ಎ & ಸಿ).
3. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾ.ಪಂ) ಗ್ರಾ.ಅ.ಪಂ.ರಾಜ್ ಇಲಾಖೆ
4. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
5. ಮೇಲ್ವಿಚಾರಕರು ಗಣಕಯಂತ್ರ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
6. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.